ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ
ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆಃ 1517/2021**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು ಃ ಎ 1. ಮಹಿಮಹೇಶ
ತಂದೆ - ಲೇಟ್ ಪುಟ್ಟಣ್ಣಯ್ಯ ಕೆ.ಜಿ.
ಸುಮಾರು 69 ವರ್ಷ ವಯಸ್ಸು,
ಮೈಸೂರು ಜಿಲ್ಲೆ, ಮೈಸ.

## ದೋಷಾರೋಪಣೆ

ಶ್ರೀಮತಿ ಪೂಜಾ ಬೆಳಕೇರಿ, ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

1. ದಿನಾಂಕ 14.11.2020 ರಂದು ಮಧ್ಯಾಹ್ನ 2.15 ಗಂಟೆ ಸಮಯದಲ್ಲಿ ಹುಣಸೂರು ತಾಲ್ಲೂಕು ಬಿಳಿಕೆರೆ ಪೊಲೀಸ್ ಠಾಣಾ ಸರಹದ್ದು ದೊಡ್ಡ ಕಾಡನಹಳ್ಳಿ ಗ್ರಾಮದ ಸರ್ವೆ ನಂ.51 ರ ಜಮೀನಿನಲ್ಲಿ ಆರೋಪಿಯಾದ ನೀವು ಜಮೀನನ್ನು ಮಟ್ಟ ಮಾಡಿಸುತ್ತಿದ್ದಾಗ ಸಾಕ್ಷಿ 1 ಮತ್ತು ಸಾಕ್ಷಿ 2 ರವರು ನಿಮ್ಮನ್ನು ಯಾಕೆ ನಮ್ಮ ಜಮೀನನ್ನು ಉಳುಮೆ ಮಾಡಿಸಿ ಮಟ್ಟ ಮಾಡಿದ್ದೀರಾ ಅಂತಿ ಕೇಳಿದ್ದಕ್ಕೆ ಆರೋಪಿಯಾದ ನೀವು ಸಾಕ್ಷಿ 1 ಅವರಿಗೆ ಪ್ರಶ್ನೆ ಮಾಡಲು ನೀನು ಯಾರು ಸೂಳೆ ಮುಂಡೆ ಅಂತ ಬಾಯಿಗೆ ಬಂದ ಹಾಗೆ ಅವಾಚ್ಯ ಶಬ್ದಗಳಿಂದ ಬೈದಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಕೊನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಅಪರಾಧ ಎಸಗುವ ಉದ್ದೇಶದಿಂದ, ಸಾಕ್ಷಿ 1 ಮತ್ತು 2 ರವರುಗಳಿಗೆ ಜಮೀನಿನಿಂದ ಹೊರಗೆ ಹೋಗದಿದ್ದರೆ ಕೊಲೆ ಮಾಡುವುದಾಗಿ ಕೊಲೆ ಬೆದರಿಕೆ

ಹಾಕಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆಪಾದನೆಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆಪಾದನೆಗಳಿಗೆ ಆರೋಪಿಗಳಾದ ನೀವುಗಳು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

(ಪೂಜಾ ಬೆಳಕೇರಿ)

ದಿನಾಂಕ: 26.06.2024 ಹೆಚ್ಚುವರಿ ದಿವಾಣಿ ನ್ಯಾಯಧೀಶರು ಮತ್ತು

ಪ್ರಂ.ದಂ.ನ್ಯಾಂ.ದಂಡಾಧಿಕಾರಿಗಳು, ಹುಣಸೂರು.

ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ
ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

<u>ಸಿ.ಸಿ. ಸಂಖ್ಯೆ: **1517/2021**</u>

ಫಿರ್ಯಾದಿದಾರರು: ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು : ಎ **1.** ಮಹಿಮಹೇಶ
ತಂದೆ - ಲೇಟ್ ಪುಟ್ಟಣ್ಣಯ್ಯ ಕೆ.ಜಿ.

<u>ಭಾರತೀಯ ದಂಡ ಸಂಹಿತೆ ಕಲಂ **240(2)** ರ ಅಡಿಯಲ್ಲಿ ಆರೋಪಿಯ ಹೇಳಿಕೆ</u>

ಪ್ರಶ್ನೆ: ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ?

ಉತ್ತರ:

ಪ್ರಶ್ನೆ: ತಪ್ಪೊಪ್ಪಿಕೊಳ್ಳುವಿರೋ, ವಿಚಾರಣೆಯಾಗಬೇಕೆನ್ನುವಿರೋ?

ಉತ್ತರ:

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು, ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ.

**(ಪೂಜಾ ಬೆಳಕೇರಿ)**

ದಿನಾಂಕ: **26.06.2024** ಹೆಚ್ಚುವರಿ ದಿವಾಣಿ ನ್ಯಾಯಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.